# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-42ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 07.11.2020 ರಂದು ಬೆಳಗ್ಗೆ 10.30 ಗಂಟೆಗೆ ವಾರ್ಡ್ ನಂ.42 ಲಕ್ಷ್ಮೀದೇವಿನಗರ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.42ರ ವಾರ್ಡ್ ಕಛೇರಿಯಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಅಧಿಕಾರಿಗಳು:**

1. ಡಾ|| ಎಂ. ಜಿ. ಹಳ್ಳಿ ಶಿವರಾಮ್, ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು
2. ಸುಮಂತ್ ಗೌಡ ಸಿ. ಎಸ್., ಸಹಾಯಕ ಅಭಿಯಂತರರು, ವಾರ್ಡ್ ನಂ.42 ಹಾಗೂ ಸದಸ್ಯ ಕಾರ್ಯದರ್ಶಿ
3. ನಾರಾಯಣ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.42,
4. ಮಣಿ ಮೇಘಲೈ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.42
5. ನಿರ್ಮಲ, ಕಂದಾಯ ವಸೂಲಿಗಾರರು, ವಾರ್ಡ್ ನಂ.42
6. ದಾನ ರೆಡ್ಡಿ ಕೆ., ಸ.ಕಾ.ನಿ.ಅ., ಬೆಸ್ಕಾಂ
7. ಸಂತೋಷ್ ಕುಮಾರ್, ಸ.ಅ., ಬೆಸ್ಕಾಂ
8. ನಾರಾಯಣಸ್ವಾಮಿ, ಮೇಲ್ವಿಚಾರಕರು
9. ದೇವರಾಜ್, ಮೇಲ್ವಿಚಾರಕರು
10. ಮಂಜುನಾಥ್, ಮೀಟರ್ ರೀಡರ್
11. ಗಗನ್ ಟಿ. ಕೆ., ಮಾರ್ಷಲ್

ವಾರ್ಡ್-42ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ವಾರ್ಡ್ ನ ಬ್ಲಾಕ್ ಸ್ಪಾಟ್‌ಗಳಲ್ಲಿ ಕಸವನ್ನು ತೆರವುಗೊಳಿಸಲು ಮಾನ್ಯ ಅಧ್ಯಕ್ಷರು ರವರು ಹಿಂದಿನ ಸಭೆಯಲ್ಲಿ ಸೂಚಿಸಿರುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಎಲ್ಲಾ ಬ್ಲಾಕ್ ಸ್ಪಾಟ್ ಗಳಲ್ಲಿ ಕಸಗಳನ್ನು ತೆರವುಗೊಳಿಸಿರುವುದಾಗಿ ತಿಳಿಸಿದರು. ಹಾಗೂ ಬ್ಲಾಕ್ ವೈಸ್ ಸಾರ್ವಜನಿಕರಿಗೆ ಕೋವಿಡ್-19 ಸೋಂಕು ಪರಿಕ್ಷೇ ನಡೆಸಲು ಸೂಚಿಸಿದರು.

**ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.42**

Scanned by CamScanner

ಸಹಾಯ 2.0 ಕೋಶದಲ್ಲಿ ದಾಖಲಾಗುವ ಸಾರ್ವಜನಿಕರ ದೂರುಗಳನ್ನು ವಿಲೇ ಮಾಡುವ ಬಗ್ಗೆ ಚರ್ಚಿಸಲಾಗಿದ್ದು, ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ದೂರುಗಳು ಬಾಕಿ ಇದ್ದು, ಇದರ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ ದೂರುಗಳನ್ನು ಶೀಘ್ರವಾಗಿ ಪರಿಹರಿಸುವುದಾಗಿ ಸಭೆಗೆ ತಿಳಿಸದಿರುತ್ತಾರೆ.

ಹಾಗೂ ಜೈ ಭುವನೇಶ್ವರಿನಗರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿರುವ ಒಣಗಿರುವ ಗಿಡಗಳು ಹಾಗೂ ಮರದ ರೆಂಬೆಗಳು ಮುರಿದು ಬಿದ್ದಿದ್ದು, ಕೂಡಲೇ ಅವುಗಳನ್ನು ತೆರವುಗೊಳಿಸುವಂತೆ ಹಿಂದಿನ ವಾರದ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಸೂಚಿಸಿರುವ ಮೇರೆಗೆ ಸಹಾಯಕ ಅಭಿಯಂತರರು ರವರು ಎಲ್ಲಾ ಒಣಗಿರುವ ಗಿಡಗಳು ಹಾಗೂ ಮರದ ರೆಂಬೆಗಳು ತೆರವುಗೊಳಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ನಡೆಸುತ್ತಿರುವ ಕಾಮಗಾರಿಗಳ ವಿವರಗಳ ಪಟ್ಟಿಯನ್ನು ಮುಂದಿನ ಸಭೆಯಲ್ಲಿ ಹಾಜರುಪಡಿಸುವಂತೆ ಮಾನ್ಯ ಅಧ್ಯಕ್ಷರು ರವರು ಸೂಚಿಸಿದರು.

**ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ.42**

ವಾರ್ಡ್ ನ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ರವರು ಮಾತನಾಡಿ ರಸ್ತೆ ಅಗೆತಕ್ಕೆ ಆನ್ ಲೈನ್ ಮುಖಾಂತರರ ಅರ್ಜಿಸಲ್ಲಿಸಿ ರಸ್ತೆ ಅಗೆತಕ್ಕೆ ಅನುಮತಿಯನ್ನು ನೀಡುವಂತೆ ಸಹಾಯಕ ಅಭಿಯಂತರರು ರವರಿಗೆ ತಿಳಿಸಿದರು.

ಹಾಗೂ ಮಾನ್ಯ ಅಧ್ಯಕ್ಷರು ರವರು ಮಾತನಾಡಿ ಸಭೆಗೆ ಸದಸ್ಯರುಗಳನ್ನು ಆಯ್ಕೆ ಮಾಡಿಕೊಳ್ಳಲು ಸೂಚಿಸಿದರು.

**ಕ್ರಮ: ಸಹಾಯಕ ಅಭಿಯಂತರರು, ವಾರ್ಡ್ ನಂ.42**

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಸುಮಂತ್ ಗೌಡ ಸಿ. ಎಸ್.)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:42

(ಡಾ|| ಎಂ. ಜಿ. ಹಳ್ಳಿ ಶಿವರಾಮ್)
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:42

Scanned by CamScanner